**<u>ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಬೈಂದೂರು</u>**

ಸಿ.ಸಿ. ನಂಬ್ರ:335/2023

ಚಾಸಾಃ 30

ಪ್ರಾಸಾಃ24

ವಾಗ್ಮೂಲದವರ ಹೆಸರು : ಅಶೋಕ ಹೆಚ್.ಸಿ.

ತಂದೆಯ ಹೆಸರು : ದಿ. ಸುಂದರ್

ವಯಸ್ಸು : 57 ವರ್ಷ

ಉದ್ಯೋಗ : ಎ.ಎಸ್.ಐ.

ವಾಸ ಸ್ಥಳ : ಕುಂದಾಪುರ

ದಿನಾಂಕಃ06-11-2024 ರಂದು ಸಾಕ್ಷಿಯನ್ನು ಕರೆಯಿಸಿ ವಿಧಿಬದ್ಧವಾಗಿ ಪ್ರಮಾಣ ವಚನ ಭೋದಿಸಲಾಯಿತು.

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ</u>**

ನಾನು 2008 ರಿಂದ 2013 ರವರೆಗೆ ಬೈಂದೂರು ಪೊಲೀಸ್ ಠಾಣೆಯಲ್ಲಿ ಹೆಡ್ ಕಾನ್ಸಟೇಬಲ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 29-05-2010 ರಂದು ಪೊಲೀಸ್ ಠಾಣೆಯಲ್ಲಿರುವಾಗ ಚಾಸಾ 1 ರವರು ಸಂಜೆ 04.00 ಗಂಟೆಗೆ ಠಾಣೆಗೆ ಬಂದು ಲಿಖಿತ ದೂರನ್ನು ನೀಡಿದ್ದು, ಸದರಿ ದೂರನ್ನು ಸ್ವೀಕರಿಸಿ ಠಾಣಾ ಅಪರಾಧ ಕ್ರಮಾಂಕ.162/2010 ರಂತೆ ಭಾರತ ದಂಡ ಸಂಹಿತೆಯ ಕಲಂ 392 ಸಹ ವಾಚಕ ಕಲಂ 34 ರಂತೆ ಪ್ರಕರಣವನ್ನು ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ದೂರಿನೊಂದಿಗೆ ಮೂಲ ಪ್ರತಿಯನ್ನು ನ್ಯಾಯಾಲಯಕ್ಕೆ ಮತ್ತು ಪ್ರತಿಗಳನ್ನು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

3. ಸಾಕ್ಷಿಯು ನಿಪಿ-1 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ 12 ಎಂದು ಗುರುತಿಸಲಾಯಿತು. ಅದರಲ್ಲಿರುವ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ.12(ಎ) ಎಂದು ಗುರುತಿಸಲಾಯಿತು. ನಾನು ಚಾಸಾ 31 ರವರ ಜೊತೆ 2 ವರ್ಷಗಳ ಕಾಲ ಕೆಲಸ ಮಾಡಿರುತ್ತೇನೆ. ಅವರ ಸಹಿಯನ್ನು ನೋಡಿದರೆ ಗುರುತಿಸಬಹುದು. ಆರೋಪಿಯ ದಸ್ತಗಿರಿ ಮಹಜರಿನಲ್ಲಿರುವ ಚಾ,ಸಾ.31ರವರ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ ಕಾರಣ ಅದನ್ನು ನಿ.ಪಿ.13 ಎಂದು ಅದರಲ್ಲಿರುವ ಚಾ,ಸಾ.31ರ ಸಹಿಯನ್ನು ನಿ.ಪಿ.13(ಎ) ರಿಂದ (ಡಿ) ಎಂದು ಗುರುತಿಸಲಾಯಿತು. ನಿ.ಪಿ.2ರಲ್ಲಿರುವ ಚಾ.ಸಾ.31ರವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಕಾರಣ ಚಾ.ಸಾ.31ರವರ ಸಹಿಯನ್ನು ನಿ.ಪಿ.2(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರಾದ ಶ್ರೀ ಎಸ್.ಎಸ್.ಎನ್. ರವರಿಂದ

ಆರೋಪಿ ಪರ ವಕೀಲರು ಪಾಟಿ ಸವಾಲು ಇರುವುದಿಲ್ಲ ಎಂದು ತಿಳಿಸಿದ ಮೇರೆಗೆ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು

ಓ.ಹೇ.ಕೇ.ಸ.ಇದೆ

**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ಬೈಂದೂರು**